ಅಧ್ಯಕ್ಷರು ; ಪ್ರಸ್ತಾವ ಏನೆಂದರೆ, "ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ಪಂಚಾಯತ್‌ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ಅರಣ್ಯ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ, 1999

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಡಿ. ಮಂಜುನಾಥ (ಅರಣ್ಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ಅರಣ್ಯ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು ; ಪ್ರಸ್ತಾವ ಏನೆಂದರೆ,

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ಅರಣ್ಯ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ರಿಂದ 3ರವರೆಗೆ

ಅಧ್ಯಕ್ಷರು : "ಖಂಡ 2ರಿಂದ 3ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ರಿಂದ 3ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

("ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಡಿ. ಮಂಜುನಾಥ್ (ಅರಣ್ಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ಅರಣ್ಯ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1999ರ ಕರ್ನಾಟಕ ಅರಣ್ಯ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಶಾಸನಾತ್ಮಕ ನಿರ್ಣಯ

ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯು ವಿವಿಧ ಹಣಕಾಸು ಸಂಸ್ಥೆಗಳಿಂದ ಸಾಲದ ರೂಪದಲ್ಲಿ ಪಡೆಯುವ ಮೊತ್ತವನ್ನು ಹೆಚ್ಚು ಮಾಡುವ ಬಗ್ಗೆ.

ಶ್ರೀ ಜೆ.ಹೆಚ್. ಪಟೇಲ್ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ ನಾನು ಈ ಕೆಳಕಂಡ ನಿರ್ಣಯವನ್ನು ತಮ್ಮ ಅನುಮತಿ ಕೋರಿ ಸಭೆಯ ಮುಂದೆ ಮಂಡಿಸುತ್ತೇನೆ.

``1948ನೇ ಸಾಲಿನ ವಿದ್ಯುಚ್ಛಕ್ತಿ ಅಧಿನಿಯಮದ 65ನೇ ಪ್ರಕರಣದ (3)ನೇ ಉಪ ಪ್ರಕರಣದ ಮೇರೆಗೆ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯು ವಿವಿಧ ಹಣಕಾಸು ಸಂಸ್ಥೆಗಳಿಂದ ಸಾಲದ ರೂಪದಲ್ಲಿ ಪಡೆಯಲೆಂದು ನಿಗದಿಗೊಳಿಸಿರುವ ಮೊತ್ತ 1750 ಕೋಟಿಯಿಂದ 2100 ಕೋಟಿ ರೂಪಾಯಿಗಳಿಗೆ ಹೆಚ್ಚು ಮಾಡಬೇಕೆಂದು ಈ ಸದನವು ನಿರ್ಣಯಿಸುತ್ತದೆ".

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

``1948ನೇ ಸಾಲಿನ ವಿದ್ಯುಚ್ಛಕ್ತಿ ಅಧಿನಿಯಮದ 65ನೇ ಪ್ರಕರಣದ (3)ನೇ ಉಪ ಪ್ರಕರಣ ಮೇರೆಗೆ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯು ವಿವಿಧ ಹಣಕಾಸು ಸಂಸ್ಥೆಗಳಿಂದ ಸಾಲದ ರೂಪದಲ್ಲಿ ಪಡೆಯಲೆಂದು ನಿಗಧಿಗೊಳಿಸಿರುವ ಮೊತ್ತ 1750 ಕೋಟಿಯಿಂದ 2100 ಕೋಟಿ ರೂಪಾಯಿಗಳಿಗೆ ಹೆಚ್ಚು ಮಾಡಬೇಕೆಂದು ಈ ಸದನವು ನಿರ್ಣಯಿಸುತ್ತದೆ".